358

# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ: 468 (370)
ಸದಸ್ಯರ ಹೆಸರು : ಶ್ರೀ ಎಂ.ಎಲ್. ಅನಿಲ್‌ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 07.12.2023
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಯವರು

| ಪ್ರಶ್ನೆ | ಉತ್ತರ |
|---|---|
| ಅ) ದಿನಾಂಕ: 24.04.1994ರವರೆಗೆ ಚಾಲ್ತಿಯಲ್ಲಿದ್ದ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 17ಸಿ ರಡಿ ಮುಂಬಡ್ತಿ ಹೊಂದಿರುವ ನೌಕರರನ್ನು ಅಂತಿಮ ಜೇಷ್ಠತಾ ಪಟ್ಟಿಯಲ್ಲಿ ಸೇರ್ಪಡೆ ಮಾಡಬಹುದೇ; ಅಂತಿಮ ಜೇಷ್ಠತಾ ಪಟ್ಟಿಯಲ್ಲಿ ಸೇರ್ಪಡೆ ಮಾಡಬಹುದಾದಲ್ಲಿ ಯಾವ ನಿಯಮಗಳಡಿ ಸೇರ್ಪಡೆ ಮಾಡಲು ಅವಕಾಶಗಳಿವೆ; ಈ ಬಗ್ಗೆ ಪೂರ್ಣ ಮಾಹಿತಿ ಒದಗಿಸುವುದು. | ದಿನಾಂಕ: 24.02.1994ರವರೆಗೆ ಚಾಲ್ತಿಯಲ್ಲಿದ್ದ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 17(ಸಿ) ರನ್ವಯ ನೇರ ನೇಮಕಾತಿ ಹುದ್ದೆಗಳ ಎದುರಾಗಿ ತಾತ್ಕಾಲಿಕವಾಗಿ ಮುಂಬಡ್ತಿ ನೀಡಲು ಅವಕಾಶ ಕಲ್ಪಿಸಲಾಗಿದ್ದು, ಈ ಮುಂಬಡ್ತಿಯನ್ನು ನಿಯಮಿತ ಮುಂಬಡ್ತಿಯಾಗಿ ಪರಿವರ್ತಿಸಲು ಹಕ್ಕು ಇರುವುದಿಲ್ಲ ಹಾಗೂ ಈ ನಿಯಮಗಳನ್ವಯ ತಾತ್ಕಾಲಿಕ ಮುಂಬಡ್ತಿಯನ್ನು ಹೊಂದಿದ ನೌಕರರುಗಳು ಆ ಹುದ್ದೆಗಳಲ್ಲಿ ಸಲ್ಲಿಸಿರುವ ಸೇವೆಯನ್ನು ಜೇಷ್ಠತೆಗೆ ಪರಿಗಣಿಸಲು ಅವಕಾಶವಿರುವುದಿಲ್ಲ. |
| ಆ)ನಿಯಮಗಳಡಿ ಅವಕಾಶಗಳು ಇಲ್ಲದೆ ಇರುವ ದಿನಾಂಕ: 24.04.1994ರವರೆಗೆ ಚಾಲ್ತಿಯಲ್ಲಿದ್ದ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು, 1977ರ ನಿಯಮ 17 ಸಿ ರಡಿ ಮುಂಬಡ್ತಿ ಹೊಂದಿರುವ ನೌಕರರನ್ನು ಅಂತಿಮ ಜೇಷ್ಠತಾ ಪಟ್ಟಿಯಿಂದ ತೆಗೆದು ಜೇಷ್ಠತಾ ಪಟ್ಟಿ ಪ್ರಕಟಿಸಲು ಕ್ರಮ ವಹಿಸಲಾಗುವುದೇ; ಹಾಗಿದ್ದಲ್ಲಿ, ಅಂತಹ ಪ್ರಕ್ರಿಯೆಗಳನ್ನು ಎಷ್ಟು ದಿನಗಳೊಳಗೆ ಮಾಡಲಾಗುವುದು:<br>(ಇ) ನಿಯಮಗಳಲ್ಲಿ ಅವಕಾಶ ಇಲ್ಲದಿದ್ದರೂ ಅಂತಿಮ ಜೇಷ್ಠತಾ ಪಟ್ಟಿಯಲ್ಲಿ ಸೇರ್ಪಡೆ ಮಾಡಲು ಕಾರಣರಾದ ಅಧಿಕಾರಿ ಮತ್ತು ನೌಕರರ ಮೇಲೆ ಯಾವ ಕ್ರಮ ಜರುಗಿಸಲಾಗುವುದು; ಈ ಬಗ್ಗೆ ಪೂರ್ಣ ಮಾಹಿತಿ ಒದಗಿಸುವುದು? | ದಿನಾಂಕ: 18.08.2006ರ ಅಧಿಸೂಚನೆ ಸಂಖ್ಯೆ: ಸಿಆಸುಇ 14 ಎಸ್‌ಎಸ್‌ಆರ್ 2006ರನ್ವಯ ಕರ್ನಾಟಕ ಸರ್ಕಾರಿ ನೌಕರರ (ಜೇಷ್ಠತೆ) ನಿಯಮಗಳು, 1957ರ ನಿಯಮ 10ಕ್ಕೆ ತಿದ್ದುಪಡಿ ಮಾಡಲಾಗಿದ್ದು, ಈ ತಿದ್ದುಪಡಿಯನ್ವಯ ಎಲ್ಲಾ ನೇಮಕಾತಿ ಪ್ರಾಧಿಕಾರಗಳು ಪ್ರತಿ ವರ್ಷವೂ ಜೇಷ್ಠತಾ ಪಟ್ಟಿಯನ್ನು ಜೇಷ್ಠತಾ ನಿಯಮಗಳಲ್ಲಿ ಕಲ್ಪಿಸಲಾಗಿರುವ ಆಸ್ಪದದನ್ವಯ ಪ್ರತಿಯೊಂದು ವೃಂದದ ಅಂತಿಮ ಜೇಷ್ಠತಾ ಪಟ್ಟಿಯನ್ನು ತಯಾರಿಸಿ ಪ್ರಕಟಿಸುವಂತೆ ಸೂಚನೆಗಳನ್ನು ನೀಡಲಾಗಿರುತ್ತದೆ. ಆದುದರಿಂದ, ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವುದು ಆಯಾಯ ಇಲಾಖೆಗಳ ಸಂಬಂಧಿಸಿದ ನೇಮಕಾತಿ ಪ್ರಾಧಿಕಾರಗಳ ಜವಾಬ್ದಾರಿಯಾಗಿರುತ್ತದೆ. |

ಸಂಖ್ಯೆ: ಸಿಆಸುಇ 268 ಸೇನೆನಿ 2023

(ಸಿದ್ಧರಾಮಯ್ಯ)
ಮುಖ್ಯಮಂತ್ರಿ